ಇ) ತರಬೇತಿ ಹೊಂದಿದ ಶಾರೀರಿಕ ಶಿಕ್ಷಣ ನಿರ್ದೇಶಕರನ್ನು ಸರ್ಕಾರವು ಪ್ರಸಕ್ತ ಖಾಲಿ ಸರ್ಕಾರಿ ಪ್ರೌಢ ಶಾಲೆಗಳಿಗೆ ಈ ಶಾಲೆಯಲ್ಲಿ ಸಂದರ್ಶನ ನಡೆಸಿ ನೇಮಕಾತಿ ಮಾಡಲು ಕ್ರಮ ಕೈಗೊಳ್ಳುವರೇ ?

(ಈ ಪ್ರಶ್ನೆಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಉತ್ತರ ನೀಡುವರು)

ಶ್ರೀ ಜೀವರಾಜ ಆಳ್ವ (ಉನ್ನತ ಶಿಕ್ಷಣ ಮಂತ್ರಿಗಳು).—

ಅ) ಪ್ರೌಢ ಶಾಲೆಗಳಲ್ಲಿ ೧೪೨.

ಆ) ಬಂದಿಲ್ಲ.

ಇ) ಕ್ರಮ ತೆಗೆದುಕೊಳ್ಳಲಾಗುವುದು.

ದ. ಕ. ಜಿಲ್ಲೆಯಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳು.

೨೧೦೬. ಶ್ರೀ ಕೆ. ವಸಂತ ಬಂಗೇರ (ಬೆಳ್ತಂಗಡಿ).—ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಎಷ್ಟು ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತವೆ. (ವಿವರಗಳನ್ನು ನೀಡುವುದು)

ಆ) ಖಾಲಿ ಹುದ್ದೆಗಳನ್ನು ಎಷ್ಟು ಸಮಯದೊಳಗೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ?

ಇ) ಈ ಹುದ್ದೆಗಳು ಎಷ್ಟೋ ಸಮಯದಿಂದ ಖಾಲಿ ಇರುವುದರಿಂದ ಪ್ರಾಥಮಿಕ ಶಿಕ್ಷಣವನ್ನು ಕುಸಿಯುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ?

ಶ್ರೀ ಬಿ. ಸೋಮಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು) —

ಅ) ೧೫೦. (ವಿವರಗಳನ್ನು ಪ್ರತ್ಯೇಕವಾಗಿ ಸದಸ್ಯರಿಗೆ ಒದಗಿಸಲಾಗುವುದು)

ಆ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅಭ್ಯರ್ಥಿಗಳ ಸಂದರ್ಶನಗಳನ್ನು ಕೂಡಲೇ ನಡೆಸಿ ನೇರ ನೇಮಕಾತಿ ಮೂಲಕ ತುಂಬಲು ಜಿಲ್ಲಾ ಆಯ್ಕೆ ಸಮಿತಿಗಳಿಗೆ ನಿರ್ದೇಶನ ನೀಡಲಾಗಿದೆ.

ಇ) ಶಿಕ್ಷಕರ ಕೊರತೆ ಪೂರೈಸಲು ಹೆಚ್ಚುವರಿ ಶಿಕ್ಷಕರಿರುವ ಶಾಲೆಗಳಿಂದ ಅಗತ್ಯವಿರುವ ಶಾಲೆಗಳಿಗೆ ಶಿಕ್ಷಕರನ್ನು ಸ್ಥಳಾಂತರಿಸುವ ಅಥವಾ ನಿಯೋಜಿಸುವ ಮೂಲಕ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗದಂತೆ ವ್ಯವಸ್ಥೆ ಮಾಡಲಾಗಿದೆ.

ಅಡಿಕೆ ಬೆಲೆ ಕುಸಿತ

೨೨೭೪. ಶ್ರೀ ಜಿ. ಎಸ್. ಆಚಾರ್ (ಬೈಂದೂರು). — ಮಾನ್ಯ ವಿದ್ಯುತ್ ಹಾಗೂ ತೋಟಗಾರಿಕೆ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಅಡಿಕೆ ಬೆಲೆ ಕುಸಿತದಿಂದಾಗಿ ರೈತರು ಕಂಗೆಟ್ಟ ಸಂದರ್ಭದಲ್ಲಿ ಕಳೆದ ವರ್ಷ ಸರ್ಕಾರ ನೀಡಿದ ಆಶ್ವಾಸನೆಗಳಲ್ಲಿ ಕಾರ್ಯಗತವಾಗಿರುವುದೆಷ್ಟು ?

ಆ) ಹಾಗಿಲ್ಲದಿದ್ದಲ್ಲಿ, ಕಾರ್ಯಗತಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

ಶ್ರೀ ಲಕ್ಷ್ಮೀನರಸಿಂಹಯ್ಯ (ವಿದ್ಯುತ್ ಮತ್ತು ತೋಟಗಾರಿಕೆ ರಾಜ್ಯ ಸಚಿವರು) —

ಅ) ಒಂದು.

ಆ) ಅಡಿಕೆ ಬೆಳೆಯು ಬೆಲೆ ಕುಸಿತ ಹಾಗೂ ಅಡಿಕೆ ಬೆಳೆಗಾರರ ತೊಂದರೆಗಳ ಬಗ್ಗೆ ಅಧ್ಯಯನ ಮಾಡಲು ಮತ್ತು ಪರಿಹಾರ ಸೂಚಿಸಲು ಸರ್ಕಾರಿಂದ ಆದೇಶ ಸಂಖ್ಯೆ ಎಪಿಟಿ ೧೫೬ ಪಿಹೆಚ್‌ಜಿ ೮೭

ದಿನಾಂಕ ೩-೧೨-೧೯೮೭ರಲ್ಲಿ ಕರ್ನಾಟಕ ರಾಜ್ಯ ಹಾಗೂ ಕೇರಳ ರಾಜ್ಯಗಳ ಸದಸ್ಯರನ್ನೊಳಗೊಂಡ ಒಂದು ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ.

ಬೈಂದೂರು ಪ್ರಥಮ ದರ್ಜೆ ಕಾಲೇಜು ಕಟ್ಟಡ

೨೨೮೦ ಶ್ರೀ ಜಿ. ಎಸ್. ಆಚಾರ್ (ಬೈಂದೂರು).— ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೈಂದೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಸ್ವಂತ ಕಟ್ಟಡವಿಲ್ಲದಿರುವುದನ್ನು ಮನಗಂಡ ಸರ್ಕಾರವು ಕಳೆದ ವರ್ಷದ ಆಯವ್ಯಯ ಪಟ್ಟಿಯಲ್ಲಿ ಹಣ ವಿಾಸಲಾಗಿರಿಸಿದ್ದು ನಿಜವಲ್ಲವೆ ?

ಆ) ಹಾಗಿದ್ದಲ್ಲಿ, ಕಳೆದ ವರ್ಷ ಪ್ರಾರಂಭವಾಗದಿರಲು ಕಾರಣವೇನು ?

ಇ) ಸದರಿ ಕಟ್ಟಡದ ರಚನೆ ಪ್ರಾರಂಭಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ ?

ಶ್ರೀ ಜೀವರಾಜಆಳ್ವ (ಉನ್ನತ ಶಿಕ್ಷಣ ಸಚಿವರು).—

ಅ) ನಿಜ.

ಆ) ಕಳೆದ ಸಾಲಿನಲ್ಲಿ ಮಿತವ್ಯಯ ಆದೇಶ ಅಸ್ತಿತ್ವದಲ್ಲಿದ್ದ ಕಾರಣ ಕೆಲಸ ಪ್ರಾರಂಭಿಸಲು ಸಾಧ್ಯವಾಗಲಿಲ್ಲ.

ಇ) ಈಗಾಗಲೇ ಲೋಕೋಪಯೋಗಿ ಇಲಾಖೆಯು ದಕ್ಷಿಣದ ಪುುಖ್ಯ ಅಭಿಯಂತರರನ್ನು ಸದರಿ ಕಟ್ಟಡದ ನಕ್ಷೆ ಮತ್ತು ಅಂದಾಜನ್ನು ತಯಾರಿಸಿ ಕಳುಹಿಸಲು ಕೋರಲಾಗಿದೆ. ನಕ್ಷೆ ಹಾಗೂ ಅಂದಾಜನ್ನು ಸ್ವೀಕರಿಸಿದ ನಂತರ ಆಡಳಿತ ಅನುಮೋದನೆ ನೀಡಿ ಕಟ್ಟಡ ಪ್ರಾರಂಭಿಸಲು ಪರಿಶೀಲಿಸಲಾಗುವುದು.

ಮಂಗಳೂರಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಸರ್ಕಾರ ಪಡೆದ ಹಣ

೨೨೮೨. ಶ್ರೀ ಜಿ. ಎಸ್. ಆಚಾರ್ (ಬೈಂದೂರು).— ಮಾನ್ಯ ಧಾರ್ಮಿಕ ಹಾಗೂ ದತ್ತಿ ಮಂತ್ರಿ ನಿಯಂತ್ರಿತ ಮಾರುಕಟ್ಟೆ ಹಾಗೂ ಖುಷ್ಕಿ ಜಮೀನು ಅಭಿವೃದ್ಧಿ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಬಾರಿ ಯಾವ ಯಾವ ದಿನಾಂಕದಂದು ಸರ್ಕಾರ ಮಂಗಳೂರಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಎಷ್ಟೆಷ್ಟು ಮೊತ್ತದ ಹಣ ಪಡೆದಿದೆ ?

ಆ) ಮಾರುಕಟ್ಟೆ ಸಮಿತಿ ಸದರಿ ಹಣವನ್ನು ಖಜಾನೆಗೆ ಪಾವತಿ ಮಾಡುವಾಗ ಠೇವಣಾತಿಯ ಮೇಲೆ ಸಾಲ ಮಾಡಿರುವುದೇ ?

ಇ) ಈ ವ್ಯವಹಾರದಲ್ಲಿ ಸಮಿತಿಗೆ ನಷ್ಟವಾದ ಹಣವೆಷ್ಟು ?

ಈ) ಈ ಬಡ್ಡಿಯನ್ನು ಸರ್ಕಾರ ನೀಡುತ್ತದೆಯೇ ?